ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ**

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ: ಸಿ7(3):ಪ್ರಾ.ಶಿ.ಅ:ಭಾ.ನೀ:1-5 ಆಂ.ಮಾ.ಪ.-346/2015-16 ದಿನಾಂಕ: 04-12-2015

**-:ಜ್ಞಾಪನಾ:-**

ವಿಷಯ:-ಎ.ಸಿ.ಇ. ಫೌಂಡೇಷನ್ ಸ್ಕೈ ಹೈ ಶಾಲೆ, ನಂ.6, 2ನೇ ಕ್ರಾಸ್, 4ನೇ ಮೈನ್, ಮಣಿಪಾಲ್ ಆಸ್ಪತ್ರೆ ಹಿಂಭಾಗ, ರಾಜರಾಜೇಶ್ವರಿ ನಗರ, ಬೆಂಗಳೂರು. ಈ ಶಾಲೆಗೆ 2015-16ನೇ ಸಾಲಿನಿಂದ 1-5ನೇ ತರಗತಿ ಆಂಗ್ಲ ಮಾಧ್ಯಮ ಪರಿವರ್ತನೆ ನೀಡುವ ಬಗ್ಗೆ.

**ಉಲ್ಲೇಖ**: 1. ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ರಾಜ್ಯ ಸರ್ಕಾರವು ಸಲ್ಲಿಸಿದ್ದ ಎಸ್.ಎಲ್.ಪಿ.18139-18163 /2008 ಅನ್ನು ಸಿವಿಲ್ ಅಪೀಲ್ ಎಂದು ಪರಿಗಣಿಸಿ ಸಂವಿಧಾನ ಪೀಠಕ್ಕೆ ವರ್ಗಾವಣೆಗೊಂಡ ತರುವಾಯದಲ್ಲಿ ದಿನಾಂಕ: 06-05-2014 ರಲ್ಲಿ ಹೊರಟಿರುವ ತೀರ್ಪು.

2. ದಿನಾಂಕ: 06.05.2014 ರ ತೀರ್ಪಿನ ಕುರಿತು ಸಲ್ಲಿಸಲಾಗಿದ್ದ ಮರು ಪರಿಶೀಲನಾ ಅರ್ಜಿ ಸಂಖ್ಯೆ: 1878-1911/2014 ರಲ್ಲಿ ದಿನಾಂಕ: 09.09.2014 ರಂದು ವಜಾ ಆದೇಶ. ನಂತರದಲ್ಲಿ ರಾಜ್ಯ ಸರ್ಕಾರ ದಾಖಲಿಸಿದ್ದ ಪರಿಹಾರಾತ್ಮಕ ಅರ್ಜಿಯ (Curative Petition) ಆದೇಶ.
3. ಸರ್ಕಾರದ ಅರೆ ಸರ್ಕಾರಿ ಪತ್ರ ಸಂಖ್ಯೆ: ಇಡಿ.263.ಪಿಜಿಸಿ.2015, ದಿನಾಂಕ:02-06-2015.
4. ಏಕ ಕಡತದಲ್ಲಿನ ಸರ್ಕಾರದ ಆದೇಶ ದಿನಾಂಕ:06-06-2015.
5. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬೆಂಗಳೂರು ದಕ್ಷಿಣ ವಲಯ-1, ಶಂಕರಪುರ, ಬೆಂಗಳೂರು-04 ರವರು ಸಲ್ಲಿಸಿರುವ ಪ್ರಸ್ತಾವನೆ.
6. ಏಕ ಕಡತದಲ್ಲಿನ ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ.359.ಪಿಜಿಸಿ.2015, ದಿನಾಂಕ:05-09-2015.

*****

1994-95 ರಲ್ಲಿ ಜಾರಿಗೊಳಿಸಲಾದ ಭಾಷಾ ನೀತಿ ಕುರಿತಂತೆ ಹಲವು ಸಂಸ್ಥೆಗಳು ಮೊದಲಿಗೆ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣವನ್ನು ದಾಖಲಿಸಿದ ರಿಟ್ ಅರ್ಜಿಯಲ್ಲಿ 2008 ರಲ್ಲಿ ತೀರ್ಪು ಹೊರಬಿದ್ದ ನಂತರ ಸರ್ಕಾರವು ಘನ ಸರ್ವೋಚ್ಛ ನ್ಯಾಯಾಲಯದಲ್ಲಿ ವಿಶೇಷ ರಜಾ ಅರ್ಜಿಯನ್ನು ದಾಖಲಿಸಿ ಅಂತಿಮವಾಗಿ ದಿನಾಂಕ : 06-05-2014 ರಲ್ಲಿ ಘನ ಸರ್ವೋಚ್ಛ ನ್ಯಾಯಾಲಯದ ಸಂವಿಧಾನದ ಪೀಠವು ತೀರ್ಪು ನೀಡಿದ ಮತ್ತು ಕರ್ನಾಟಕ ರಾಜ್ಯ ಘನ ಉಚ್ಚ ನ್ಯಾಯಾಲಯ ಕೆಲವು ಪ್ರಕರಣಗಳಲ್ಲಿ, ನಿಂದನಾ ದಾವೆಯು ಸೇರಿದಂತೆ ಸರ್ವೋಚ್ಛ ನ್ಯಾಯಾಲಯದ ಆದೇಶವನ್ನು ಅನುಷ್ಠಾನಗೊಳಿಸುವಂತೆ ಆದೇಶಿಸಿದೆ. ಈ ಹಿನ್ನಲೆಯಲ್ಲಿ 01 ರಿಂದ 5ನೇ ತರಗತಿಗೆ ಆಂಗ್ಲ ಮಾಧ್ಯಮದ ಪರಿವರ್ತನೆಗೆ ಸರ್ಕಾರವು ಉಲ್ಲೇಖ-3 ಮತ್ತು 4, 6 ರಲ್ಲಿ ಅನುಮತಿ ನೀಡಿರುತ್ತದೆ.

ಉಲ್ಲೇಖ (5) ರಲ್ಲಿ **ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬೆಂಗಳೂರು ದಕ್ಷಿಣ ವಲಯ-1, ಶಂಕರಪುರ, ಬೆಂಗಳೂರು-04** ಇವರಿಂದ ಬಂದಿರುವ ಪ್ರಸ್ತಾವನೆಯಲ್ಲಿ ಸದರಿ ಶಾಲೆಯು 01 ರಿಂದ 5ನೇ ತರಗತಿಯವರೆಗೆ ಶಾಲೆಯು ಪ್ರಾರಂಭವಾದಾಗಿನಿಂದ ನಿರಂತರವಾಗಿ ನಡೆಯುತ್ತಿದ್ದು, ಕನ್ನಡ ಮಾಧ್ಯಮದಿಂದ ಆಂಗ್ಲ ಮಾಧ್ಯಮಕ್ಕೆ ಪರಿವರ್ತನೆ ನೀಡಬಹುದೆಂದು **ಕ್ಷೇತ್ರ ಶಿಕ್ಷಣಾಧಿಕಾರಿಗಳು** ಅಭಿಪ್ರಾಯ ನೀಡಿದ್ದಾರೆ. ಸದರಿಯವರ ಅಭಿಪ್ರಾಯ ಮತ್ತು ಉಲ್ಲೇಖದಲ್ಲಿನ ಸರ್ಕಾರದ ಆದೇಶಗಳಂತೆ, ಕೆಳಕಂಡ **01** ಶಾಲೆಗೆ 2015-16ನೇ ಶೈಕ್ಷಣಿಕ ಸಾಲಿನಿಂದ 01 ರಿಂದ 5ನೇ ತರಗತಿಗಳಲ್ಲಿ ಆಂಗ್ಲ ಮಾಧ್ಯಮದಲ್ಲಿ ಬೋಧಿಸಲು ಕೆಳಗಿನ ಷರತ್ತುಗಳಿಗೊಳಪಟ್ಟು ಅನುಮತಿ ನೀಡಿ ಆದೇಶಿಸಿದೆ.

1. ಎಲ್ಲಾ ಸಂಸ್ಥೆಗಳಿಂದ ಕರ್ನಾಟಕ ಶಿಕ್ಷಣ ಕಾಯ್ದೆ ನಿಯಮಾವಳಿಗಳನ್ವಯ ನಮೂನೆ-3 ರಲ್ಲಿ ಅಗತ್ಯ ವಿವರಗಳನ್ನು ನಮೂದಿಸಿ 01 ರಿಂದ 5ನೇ ತರಗತಿ ಕನ್ನಡ ಮಾಧ್ಯಮದ ತರಗತಿಗಳನ್ನು ನಡೆಸಲು ವಿತರಿಸಲಾಗಿದ್ದ ಮೂಲ ನೋಂದಣಿ ಪ್ರಮಾಣ ಪತ್ರವನ್ನು ಉಪನಿರ್ದೇಶಕರು 15 ದಿನಗಳೊಳಗೆ ಪಡೆದು ಸಲ್ಲಿಸಿದ ನಂತರದಲ್ಲಿ ನಮೂನೆ-4 ರಲ್ಲಿ ಆಂಗ್ಲ ಮಾಧ್ಯಮಕ್ಕೆ ಪರಿಷ್ಕೃತ ನೋಂದಣಿ ಪ್ರಮಾಣ ಪತ್ರವನ್ನು ವಿತರಿಸಲಾಗುವುದು.